# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 124

ಸದಸ್ಯರ ಹೆಸರು : ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 10.07.2018

ಉತ್ತರಿಸುವ ಸಚಿವರು : ಮಾನ್ಯ ಲೋಕೋಪಯೋಗಿ ಸಚಿವರು

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಔರಾದ್-ಬೀದರ್ ರಾಜ್ಯ ಹೆದ್ದಾರಿ ರಸ್ತೆ ಸಂಪೂರ್ಣ ಹಾಳಾಗಿದ್ದು, ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ? | ಬೀದರ್ ಜಿಲ್ಲೆಯ ಔರಾದ್-ಬೀದರ್ ರಾಜ್ಯ ಹೆದ್ದಾರಿ-15 ರಸ್ತೆಯಲ್ಲಿ ತಗ್ಗು ಗುಂಡಿಗಳನ್ನು ಮಳೆಗಾಲದಲ್ಲಿ ಜಲ್ಲಿಗಳಿಂದ ಮುಚ್ಚಿ (WBM Patch) ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿದೆ. ಮಳೆಗಾಲದ ನಂತರ ಡಾಂಬರಿನಿಂದ ತಗ್ಗು ಗುಂಡಿಗಳ ದುರಸ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |
| ಆ) | 2015 ರಿಂದ ಇಲ್ಲಿಯವರೆಗೆ ಔರಾದ್-ಬೀದರ್ ರಸ್ತೆಗಾಗಿ ಖರ್ಚು ಮಾಡಿದ ಅನುದಾನ ಎಷ್ಟು? (ವಿವರ ನೀಡುವುದು) | ಔರಾದ್-ಬೀಧರ್ ರಸ್ತೆಗಾಗಿ 2015 ರಿಂದ ಕಳೆದ ಮೂರು ವರ್ಷದಲ್ಲಿ ನಿರ್ವಹಣೆ ಮಾಡಿರುವ ವೆಚ್ಚದ ವಿವರ :-<br><br>2015-16ನೇ ಸಾಲಿನಲ್ಲಿ 35.91 ಲಕ್ಷಗಳನ್ನು ನಿರ್ವಹಣೆಗಾಗಿ ಖರ್ಚು ಮಾಡಲಾಗಿದೆ.<br><br>2016-17ನೇ ಸಾಲಿನಲ್ಲಿ 114.83 ಲಕ್ಷಗಳನ್ನು ನಿರ್ವಹಣೆಗಾಗಿ ಖರ್ಚು ಮಾಡಲಾಗಿದೆ.<br><br>2017-18ನೇ ಸಾಲಿನಲ್ಲಿ 60.32 ಲಕ್ಷಗಳನ್ನು ನಿರ್ವಹಣೆಗಾಗಿ ಖರ್ಚು ಮಾಡಲಾಗಿದೆ. |
| ಇ) | ಔರಾದ್-ಬೀದರ್ ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಯಾಗಿದ್ದು, ರಸ್ತೆ ನಿರ್ಮಾಣವಾಗಲು ಇನ್ನೂ ಎಷ್ಟು ಕಾಲಾವಧಿ ಬೇಕಾಗುವುದು, (ಮಾಹಿತಿ ನೀಡುವುದು) | ರಾಷ್ಟ್ರೀಯ ಹೆದ್ದಾರಿ-9 ಜಂಕ್ಷನ್ ನಿಂದ ಜಹಿರಾಬಾದ್ - ಬೀದರ್ - ದೇಗಲೂರುವರೆಗಿನ 58.00 ಕಿ.ಮೀ.ಉದ್ದದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಮಂತ್ರಾಲಯವು ದಿನಾಂಕ 130.06.2016ರಂದು ತಾತ್ವಿಕ ಅನುಮೋದನೆ ನೀಡಿರುತ್ತದೆ.<br><br>ಔರಾದ್ - ಬೀದರ್ 45.00 ಕಿ.ಮೀ. ರಸ್ತೆಯು ಸದರಿ ರಾಷ್ಟ್ರೀಯ ಹೆದ್ದಾರಿಯ ಭಾಗವಾಗಿರುತ್ತದೆ. ಇದು ಇನ್ನೂ ಮೇಲ್ದರ್ಜೆಯಾಗಿರುವುದಿಲ್ಲ.<br><br>ಸದರಿ ಕಾಮಗಾರಿಗೆ ಯೋಜನಾ ಸಮಾಲೋಚಕರನ್ನಾಗಿ ಮೆ.ಹೈವೇ ಇಂಜಿನಿಯರಿಂಗ್ ಕನ್ಸಲ್ಟೆಂಟ್, ಭೂಪಾಲ್ ರವರಿಗೆ ಯೋಜನಾ ವರದಿ ತಯಾರಿಸಲು ಕಾರ್ಯಾದೇಶ |

| | | |
|---|---|---|
| | | ನೀಡಲಾಗಿದೆ. ಈ ಕಾಮಗಾರಿ ಯೋಜನೆಯನ್ನು ಭಾರತ ಮಾಲಾ ಯೋಜನೆಯಡಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಕೈಗೊಂಡಿರುತ್ತದೆ. ಆದ್ದರಿಂದ, ಕೇವಲ 13.00 ಕಿ.ಮೀ. ರಸ್ತೆಯು ರಾಷ್ಟ್ರೀಯ ಹೆದ್ದಾರಿ ವಲಯಕ್ಕೆ ಸಂಬಂಧಿಸಿದ್ದು, ಪಂಕ್ತೀಕರಣವನ್ನು ಕೇಂದ್ರ ಭೂಸಾರಿಗೆ ಮಂತ್ರಾಲಯಕ್ಕೆ ಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಔರಾದ್-ಬೀದರ್ ರಸ್ತೆಗೆ ಯೋಜನಾ ವರದಿ ತಯಾರಿಸುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದ್ದು, ಸದರಿ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>ಈ ರಸ್ತೆಯ ನಿರ್ಮಾಣ ಕಾರ್ಯವನ್ನು ಯೋಜನಾ ವರದಿ ಅನುಮೋದನೆಗೊಂಡ ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |
| ಈ) | ಅತಿವೃಷ್ಟಿಯಿಂದ ಹಾಳಾದ ಬ್ರಿಡ್ಜ್‌ಗಳ ದುರಸ್ಥಿಗೆ ಖರ್ಚು ಮಾಡಿದ ಅನುದಾನವೆಷ್ಟು; ಕಾಮಗಾರಿ ಕಳಪೆ ಮಟ್ಟದಲ್ಲಿ ನಡೆದಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ? ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ. | ಔರಾದ-ಬೀದರ ರಾಜ್ಯ ಹೆದ್ದಾರಿಯಲ್ಲಿ ಅತಿವೃಷ್ಟಿಯಿಂದ ಯಾವುದೇ ಬ್ರಿಡ್ಜ್‌ಗಳು ಹಾಳಾಗಿರುವುದಿಲ್ಲ.<br><br>ಮುಂದುವರೆದು, ಔರಾದ-ಬೀದರ ರಾಜ್ಯ ಹೆದ್ದಾರಿ (ವನಮಾರಪಳ್ಳಿ-ರಾಯಚೂರು ರಾಜ್ಯ ಹೆದ್ದಾರಿ-15) ರಸ್ತೆ ಕಿಮೀ.32.60ರಲ್ಲಿ ಕೌಠಾ ಗ್ರಾಮದ ಹತ್ತಿರ ಬರುವ ಸೇತುವೆಯು ಶಿಥಿಲಗೊಂಡಿದ್ದು, ಸದರಿ ಸೇತುವೆ ದುರಸ್ತಿಗಾಗಿ ರೂ.200.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. ಈ ಸೇತುವೆ ದುರಸ್ತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕಾಮಗಾರಿ ಕಳಪೆ ಮಟ್ಟದಲ್ಲಿ ನಡೆದಿರುವ ಬಗ್ಗೆ ಸರ್ಕಾರದಲ್ಲಿ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ: ಲೋಇ 204 ಸಿಎನ್‌ಹೆಚ್ 2018.

(ಹೆಚ್. ಡಿ. ರೇವಣ್ಣ)
ಲೋಕೋಪಯೋಗಿ ಸಚಿವರು